ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

12

ಇಲಾಖೆ / ವಿಷಯ : DEPARTMENT / SUBJECT: ಮುಖ್ಯಮಂತ್ರಿ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE 9/9/2020

# ಸದ್ಯಕ್ಕೆ ಸಂಪುಟ ವಿಸ್ತರಣೆ ಇಲ್ಲ: ಸಿಎಂ ಬಿಎಸ್‌ವೈ

ಉ.ವಾ 9/9/20

ಬೆಂಗಳೂರು: ಸದ್ಯಕ್ಕೆ ಸಂಪುಟ ವಿಸ್ತರಣೆ ಇಲ್ಲ ಎಂಬುದಾಗಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ಹೇಳಿರುವುದು ಅಚ್ಚರಿ ಮೂಡಿಸಿದೆ.

ವಿಧಾನಸೌಧದಲ್ಲಿ ಮಂಗಳವಾರ ಸುದ್ದಿಗಾರರಿಗೆ ಪ್ರತಿಕ್ರಿಯಿಸಿದ ಅವರು, ಸಂಪುಟ ವಿಸ್ತರಣೆ ಸದ್ಯಕ್ಕಿಲ್ಲ, ದೆಹಲಿಗೆ ಭೇಟಿ ನೀಡಬೇಕೆಂಬ ಬಗ್ಗೆಯೂ ಇನ್ನೂ ತೀರ್ಮಾನಿಸಿಲ್ಲ. ದೆಹಲಿ ಭೇಟಿಗೆ ಯಾವುದೇ ದಿನಾಂಕವೂ ನಿಗದಿಯಾಗಿಲ್ಲ ಎಂದು ಹೇಳಿದರು.

ಸೋಮವಾರ ಸಚಿವರೊಂದಿಗಿನ ಸಮಾಲೋಚನೆ ಸಂದರ್ಭದಲ್ಲೂ ಯಡಿಯೂರಪ್ಪ ಅವರು ಈ ವಿಚಾರ ಪ್ರಸ್ತಾಪಿಸಿದರು ಎಂದು ಹೇಳಲಾಗಿದೆ. ಸದ್ಯದಲ್ಲೇ ದೆಹಲಿಗೆ ಭೇಟಿ ನೀಡಲು ಚಿಂತಿಸಿದ್ದೇನೆ. ವರಿಷ್ಠರನ್ನು ಭೇಟಿಯಾದಾಗ ಸಂಪುಟ ವಿಸ್ತರಣೆ, ಪುನಾರಚನೆ ಸೇರಿದಂತೆ ಎಲ್ಲ ಸಾಧ್ಯಾಸಾಧ್ಯತೆಗಳ ಬಗ್ಗೆಯೂ ಚರ್ಚಿಸುತ್ತೇನೆ. ಅಂತಿಮವಾಗಿ ವರಿಷ್ಠರು ಕೈಗೊಳ್ಳುವ ತೀರ್ಮಾನಕ್ಕೆ ಎಲ್ಲರೂ ಬದ್ಧರಾಗಿರಬೇಕು ಎಂದು ಸಿಎಂ ತಿಳಿಸಿದ್ದಾರೆ ಎಂದು ಗೊತ್ತಾಗಿದೆ.